ಆಗಸ್ಟ್
2023

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ಸ್ವಚ್ಛತಾವಾಣಿ
ವಾರ್ತಾಪತ್ರ



## 01 ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಪ್ರಗತಿ ಪರಿಶೀಲನೆ ಸಭೆ:

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಬಜೆಟ್'ನಲ್ಲಿ ಘೋಷಿಸಲಾದ ಯೋಜನೆಗಳ ಅನುಷ್ಠಾನ ಕುರಿತು ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ನವರ ನೇತೃತ್ವದಲ್ಲಿ ಪ್ರಗತಿ ಪರಿಶೀಲನೆ ಸಭೆ ನಡೆಯಿತು. ಈ ವೇಳೆ ಇಲಾಖೆಯ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ, ಆರ್.ಡಿ.ಪಿ.ಆರ್ ಪ್ರಧಾನ ಕಾರ್ಯದರ್ಶಿ ಶ್ರೀ ಅಂಜುಮ್ ಪರ್ವೇಜ್ ಸೇರಿದಂತೆ ಪ್ರಮುಖರು ಹಾಜರಿದ್ದರು.

## 02 ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ ಶ್ರೀ ಅಂಜುಮ್ ಪರ್ವೇಜ್ ಅಧ್ಯಕ್ಷತೆಯಲ್ಲಿ ಗ್ರಾ.ಕು.ನೀ,ನೈ ಇಲಾಖೆ ಅಧಿಕಾರಿಗಳು ಮತ್ತು ವಿಶ್ವ ಬ್ಯಾಂಕ್ ತಂಡದವರ ಸಭೆ:



ಆರ್.ಡಿ.ಪಿ.ಆರ್ ಪ್ರಧಾನ ಕಾರ್ಯದರ್ಶಿಯಾದ ಶ್ರೀ ಅಂಜುಮ್ ಪರ್ವೇಜ್ ಅವರ ಅಧ್ಯಕ್ಷತೆಯಲ್ಲಿ ಗ್ರಾ.ಕು.ನೀ,ನೈ ಇಲಾಖೆ ಇಲಾಖೆಯ ಅಧಿಕಾರಿಗಳ ಮತ್ತು ವಿಶ್ವ ಬ್ಯಾಂಕ್ ತಂಡದವರ ಸಭೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಕಚೇರಿಯಲ್ಲಿ ನಡೆಯಿತು.
ವಿಶ್ವ ಬ್ಯಾಂಕ್ ಸಹಯೋಗದ ಕಾರ್ಯಕ್ರಮಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.



## 03 ಗ್ರಾ.ಕು.ನೀ,ನೈ ಇಲಾಖೆ ನಿರ್ದೇಶಕರಿಂದ ಜೆಜೆಎಂ, ಎಸ್.ಬಿ.ಎಂ(ಗ್ರಾ) ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆ:

ಚಿಕ್ಕಮಗಳೂರಿನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ನಿರ್ದೇಶಕರಾದ ಶ್ರೀ ನಾಗೇಂದ್ರ ಪ್ರಸಾದ್ ಕೆ ಅವರು ಜೆಜೆಎಂ ಹಾಗೂ ಎಸ್.ಬಿ.ಎಂ(ಗ್ರಾ) ಕಾಮಗಾರಿಗಳ ಬಗ್ಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಈ ಸಂದರ್ಭದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ನೋಡೆಲ್ ಅಧಿಕಾರಿ, ಹಿರಿಯ ಕಾರ್ಯಪಾಲಕ ಅಭಿಯಂತರರು, ಕಿರಿಯ ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಉಪಸ್ಥಿತರಿದ್ದರು.

## 04 ಗ್ರಾ.ಕು.ನೀ,ನೈ ಇಲಾಖೆ ನಿರ್ದೇಶಕರಾದ ನಾಗೇಂದ್ರ ಪ್ರಸಾದ್ ಅವರಿಂದ ರಾಜ್ಯ ಮಟ್ಟದ ಎರಡು ದಿನದ IMIS ಮತ್ತು ಜೆಜೆಎಂ ಮೊಬೈಲ್ ಅಪ್ಲಿಕೇಷನ್ ತರಬೇತಿ ಕಾರ್ಯಾಗಾರ ಉದ್ಘಾಟನೆ:



ಶ್ರೀ ನಾಗೇಂದ್ರ ಪ್ರಸಾದ್ ಕೆ, IAS, ನಿರ್ದೇಶಕರು ಗ್ರಾ.ಕು.ನೀ,ನೈ ಇಲಾಖೆ ಅವರು ಬೆಂಗಳೂರಿನಲ್ಲಿ ನಡೆದ ರಾಜ್ಯ ಮಟ್ಟದ ಎರಡು ದಿನದ IMIS ಮತ್ತು ಜೆಜೆಎಂ ಮೊಬೈಲ್ ಅಪ್ಲಿಕೇಷನ್ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿದರು.

ಶ್ರೀ ಪ್ರದೀಪ್ ಕುಮಾರ್ ಸಕ್ಸೇನಾ ಹಿರಿಯ ನಿರ್ದೇಶಕರು IT, NIC, ಶ್ರೀ. ಶಿವಕುಮಾರ್ ಮತ್ತು ಶ್ರೀ. ಸೂರ್ಯ ಮೋಹನ್ ಶ್ರೀವಾಸ್ತವ್, ಭಾರತ ಸರ್ಕಾರದ IT ಜಂಟಿ ನಿರ್ದೇಶಕರುಗಳು, ರಾಜ್ಯ ತಂಡಕ್ಕೆ ತರಬೇತಿ ನೀಡಲಿದ್ದಾರೆ.

ಶ್ರೀ. ಎಜಾಜ್ ಹುಸೇನ್, C.E. ಗ್ರಾ.ಕು.ನೀ,ನೈ ಇಲಾಖೆ. ಶ್ರೀಮತಿ. ಪಾರ್ವತಿ, ಸಿ.ಎ.ಓ. ಗ್ರಾ.ಕು.ನೀ,ನೈ ಇಲಾಖೆ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ನೀರು ಮತ್ತು ನೈರ್ಮಲ್ಯಕ್ಕೆ ಸಂಬಂಧಪಟ್ಟ ಸಮಸ್ಯೆಗಳಿದ್ದಲ್ಲಿ ಕರೆ ಮಾಡಿ: 9480985555